ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಮೈಸೂರು ಸೂಯೇಜ್ ಫಾರಂನಲ್ಲಿರುವ ಕಸದ ವಿಲೇವಾರಿ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):-

1102 (1269) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ನಗರದ ವಿದ್ಯಾರಣ್ಯಪುರದ ಸೂಯೇಜ್ ಫಾರಂನಲ್ಲಿ ಈಗ ಸಂಗ್ರಹವಾಗಿರುವ ಕಸದ ರಾಶಿಯ ಅಂದಾಜು ಪ್ರಮಾಣವೆಷ್ಟು; ಈ ಕಸವನ್ನು ವಿಲೇವಾರಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಆ) ಮಹಾರಾಷ್ಟ್ರದ ನಾಗಪುರದಲ್ಲಿ ಕಸ ವಿಲೇವಾರಿ ಮಾಡಲು ಬಳಸುತ್ತಿರುವ ಬಯೋ ಮೈನಿಂಗ್ ತಂತ್ರಜ್ಞಾನದ ಮಾದರಿಯಲ್ಲಿಯೇ ಕಸ ವಿಲೇವಾರಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ ; (ವಿವರಗಳನ್ನು ಒದಗಿಸುವುದು)

(ಇ) ಜಿಗ್ಮಾ ಕಂಪನಿಯ ಆಧುನಿಕ ಕೊರಿಯನ್ ತಂತ್ರಜ್ಞಾನದ ಮೂಲಕ ಈ ಕಸವನ್ನು ವಿಲೇವಾರಿ ಮಾಡಲು ಸರ್ಕಾರ ಮುಂದೆ ಬಂದಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?